ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019-20 ದಿನಾಂಕ: 30-10-2019

# ಪತ್ರಿಕಾ ಆಮಂತ್ರಣ

1. ಭಾರತದ ಮಾಜಿ ಉಪಪ್ರಧಾನಿ ದಿವಂಗತ ಸರ್ಕಾರ್ ವಲ್ಲಭಬಾಯ್ ಪಟೇಲ್ ಅವರ ಜನ್ಮದಿನವನ್ನು ರಾಷ್ಟ್ರೀಯ ಏಕತಾ ದಿವಸವಾಗಿ ಆಚರಣೆ :

ಪ್ರತಿಜ್ಞಾವಚನ ಬೋಧನೆ :

ಶ್ರೀ ಬಿ. ಎಸ್. ಯಡಿಯೂರಪ್ಪ,

ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 31-10-2019 ಗುರುವಾರ ಸಮಯ : ಬೆಳಿಗ್ಗೆ 11-00 ಗಂಟೆಗೆ

ಸ್ಥಳ : ಸಮ್ಮೇಳನ ಸಭಾಂಗಣ, ಕೊಠಡಿ ಸಂಖ್ಯೆ 334, ವಿಧಾನ ಸೌಧ, ಬೆಂಗಳೂರು

2. ಪತ್ರಿಕಾಗೋಷ್ಠಿ :

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ

ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಿಂದ

ದಿನಾಂಕ: 31-10-2019 ಗುರುವಾರ ಸಮಯ : ಬೆಳಿಗ್ಗೆ 11-30 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ 343, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ನೇಮಕ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಶ್ರೀ ಎಂ.ಬಿ. ಮರಮಕಲ್, ಮೈಸೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸಂಪುಟ ದರ್ಜೆಯ ಸಚಿವರ ಸ್ಥಾನಮಾನದೊಂದಿಗೆ ಮಾನ್ಯ ಮುಖ್ಯಮಂತ್ರಿಯವರ ರಾಜಕೀಯ ಸಲಹೆಗಾರರನ್ನಾಗಿ ನೇಮಿಸಲು ಸರ್ಕಾರ ಆದೇಶ ಹೊರಡಿಸಿದೆ.

## ಅಕ್ಟೋಬರ್ 31 ರಂದು ರಾಷ್ಟ್ರೀಯ ಏಕತಾ ದಿವಸ್

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಅಕ್ಟೋಬರ್ 31, 2019 ದಿವಂಗತ ಸರ್ದಾರ್ ವಲ್ಲಭಬಾಯ್ ಪಟೇಲ್‌ರವರ ಜನ್ಮದಿನದ ಪ್ರಯುಕ್ತ ಆ ದಿನವನ್ನು ರಾಷ್ಟ್ರೀಯ ಏಕತಾ ದಿವಸ ವನ್ನು ಆಚರಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವ ಶ್ರೀ ವಿ. ಸೋಮಣ್ಣ ಅವರು ಅಕ್ಟೋಬರ್ 31 ಮತ್ತು ನವೆಂಬರ್ 1 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ನವೆಂಬರ್ 1 ರಂದು ಅಪರಾಹ್ನ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## ಸಂತಾಪ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು ಹಾಗೂ ಲೋಕಾಯುಕ್ತರಾಗಿದ್ದ ಎನ್. ವೆಂಕಟಾಚಲ ಅವರ ನಿಧನಕ್ಕೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಾರ್ವಜನಿಕ ಉದ್ದಿಮೆಗಳ ಸಚಿವ ಶ್ರೀ ಜಗದೀಶ್ ಶೆಟ್ಟರ್ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅವರು ಭ್ರಷ್ಟಚಾರ ನಿರ್ಮೂಲನೆ ಮಾಡುವಲ್ಲಿ ಪ್ರಮುಖ ಪತ್ರ ವಹಿಸಿದ್ದು ರಾಜ್ಯದ ಜನರ ಮನದಲ್ಲಿ ಮನೆ ಮಾತಾಗಿದ್ದರು. ಅವರ ನಿಧನದಿಂದ ದುಖಃತಪ್ತ ಕುಟುಂಬಕ್ಕೆ ದುಖಃ ಭರಿಸುವ ಶಕ್ತಿ ನೀಡಲೆಂದು ಅವರು ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

## ಸಂತಾಪ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ನಾಡಿನ ಹಿರಿಯ ಕಲಾವಿದರು ಹಾಗೂ ಕರ್ನಾಟಕ ಲಲಿತಕಲಾ ಅಕಾಡೆಮಿಯ ಮಾಜಿ ಸದಸ್ಯರಾದ ಎಸ್. ಧನಲಕ್ಷ್ಮಿ ಅವರ ನಿಧನಕ್ಕೆ ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷ ಡಿ. ಮಹೇಂದ್ರ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಇವರು ಕಲಾ ಶಿಕ್ಷಕಿಯಾಗಿ "ಸಂಯೋಜನೆ" ಕುರಿತು ಕಲಿಸುತ್ತಿದ್ದ ಕ್ರಮವನ್ನು ಸದಾಕಾಲ ವಿದ್ಯಾರ್ಥಿಗಳು ಸ್ಮರಿಸುತ್ತಾರೆ. ಇವರ ಅಗಲಿಕೆಯಿಂದ ಚಿತ್ರಕಲಾ ಕ್ಷೇತ್ರಕ್ಕೆ ತುಂಬಲಾರದ ನಷ್ಟ. ಇವರ ಕುಟುಂಬ ವರ್ಗದವರಿಗೆ ಈ ದು:ಖ ಭರಿಸುವ ಶಕ್ತಿ ದೊರೆಯಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

## ನವೆಂಬರ್ 8 ರಂದು ಶಿಕ್ಷಣ ಸಚಿವರ ವಿಡಿಯೋ ಸಂವಾದ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಎಸ್‍ಎಸ್‍ಎಲ್‍ಸಿ ಪರೀಕ್ಷೆಗಳ ಪೂರ್ವಭಾವಿ ಪ್ರಕ್ರಿಯೆ ಹಾಗೂ ಪರೀಕ್ಷಾ ಫಲಿತಾಂಶವನ್ನು ಉತ್ತಮಪಡಿಸುವ ಗುಣಾತ್ಮಕ ಅಂಶಗಳು ಕುರಿತಂತೆ ನವೆಂಬರ್ 8 ರಂದು ಬೆಳಿಗ್ಗೆ 11-00 ಗಂಟೆಗೆ ಮಾನ್ಯ ಶಿಕ್ಷಣ ಸಚಿವರು ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಧನಸಹಾಯಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಕನ್ನಡ ಭಾಷೆ, ಸಾಹಿತ್ಯ, ಸಂಗೀತ, ನೃತ್ಯ ಜಾನಪದ, ನಾಟಕ, ಯಕ್ಷಗಾನ, ಚಿತ್ರಕಲೆ, ಶಿಲ್ಪಕಲೆ ಮುಂತಾದ ಸೃಜನಶೀಲ ಕಲಾ ಪ್ರಕಾರಗಳಲ್ಲಿ ನಿರಂತರ ಚಟುವಟಿಕೆಗಳನ್ನು ನಡೆಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಗೆ, ಅಸಂಘಟಿತ ಕಲಾವಿದರಿಗೆ ವಾದ್ಯಪರಿಕರ ಹಾಗೂ ವೇಷಭೂಷಣ ಖರೀದಿಗಾಗಿ ಮತ್ತು ಚಿತ್ರ/ಶಿಲ್ಪಕಲಾವಿದರ ಕಲಾಕೃತಿಗಳ ಪ್ರದರ್ಶನಕ್ಕೆ 2019-20 ನೇ ಸಾಲಿಗೆ ಪ್ರೋತ್ಸಾಹ ಧನಸಹಾಯ ನೀಡಲು ಮ್ಯಾನ್ಯುಯಲ್ (ಭೌತಿಕವಾಗಿ) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನವೆಂಬರ್ 15, 2019 ರೊಳಗೆ ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗೆ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಶಿಶಿಕ್ಷು ಮೇಳ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ, ಕ್ರೈಸ್ಟ್ ಅಲಿಯನ್ಸ್ ಮತ್ತು ಯೆಸ್ ಕಂಪನಿಗಳ ಸಹಯೋಗದೊಂದಿಗೆ ಸರ್ಕಾರ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ, ಹೊಸೂರು ರಸ್ತೆ, ಬೆಂಗಳೂರು -29 ಇಲ್ಲಿ ಶಿಶಿಕ್ಷು ಮೇಳವನ್ನು ಆಯೋಜಿಸಲಾಗಿದ್ದು, ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಲ್ಲಿ ತರಬೇತಿ ಪಡೆದು ಉತ್ತೀರ್ಣರಾಗಿರುವ ಮತ್ತು ಫಲಿತಾಂಶವನ್ನು ನಿರೀಕ್ಷಿಸುತ್ತಿರುವ ಅಭ್ಯರ್ಥಿಗಳು ಮೇಳದಲ್ಲಿ ಭಾಗವಹಿಸಿ ಲಾಭವನ್ನು ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ಪ್ರಾಚಾರ್ಯರು, ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ, ಬೆಂಗಳೂರು -560 029 ಅವರನ್ನು ದೂರವಾಣಿ 080- 26562307 ಮೂಲಕ ಸಂಪರ್ಕಿಸಬಹುದು.

## ಶಿಕ್ಷಣ ಸಚಿವರಿಂದ ನೇರ ಫೋನ್‌ಇನ್ ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ನವೆಂಬರ್ 2 ರಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಶ್ರೀ ಸುರೇಶ್‌ಕುಮಾರ್ ಅವರು ಸಾರ್ವಜನಿಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳೊಂದಿಗೆ "ಸಂವೇದನಾ" ಎಂಬ ನೇರ ಫೋನ್‌ಇನ್

**ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ.  ಅಂದು ಬೆಳಿಗ್ಗೆ 11–30 ರಿಂದ ಅಪರಾಹ್ನ 1–00 ರವರೆಗೆ ನಡೆಯುವ ಈ ಕಾರ್ಯಕ್ರಮದಲ್ಲಿ  ಶಿಕ್ಷಣ ಸಚಿವರು ದೂರವಾಣಿ ಸಂಖ್ಯೆ 080– 26725654 ಹಾಗೂ 080– 26725655 ಗಳಲ್ಲಿ ಲಭ್ಯವಿರುತ್ತಾರೆ.  ಸಾರ್ವಜನಿಕರು ಶಿಕ್ಷಣ ಸಚಿವರೊಂದಿಗೆ ನೇರ ಸಂವಾದದಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಹಲವು ಶೈಕ್ಷಣಿಕ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ಮಾಧ್ಯಮ ಪ್ರತಿನಿಧಿಗಳಿಗೂ ಕಾರ್ಯಕ್ರಮದ ನೇರ ಪ್ರಸಾರಕ್ಕೆ ಅವಕಾಶ ಇದ್ದು, ಅಂದು ಶಿಕ್ಷಣ ಸಚಿವರು ಮಾಧ್ಯಮ ಮಿತ್ರರೊಂದಿಗೂ ಸಹ ಇದೇ ಸಂದರ್ಭದಲ್ಲಿ ಡಿ.ಎಸ್.ಇ.ಆರ್.ಟಿ. 100 ಅಡಿ ರಿಂಗ್ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ 3 ನೇ ಹಂತ, ಬೆಂಗಳೂರು ಇಲ್ಲಿ ಚರ್ಚೆ ನಡೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.**